ಎಂ ಸಿ ನಂಃ 10/2026
ಪಿ ಡಬ್ಲ್ಯೂಃ01

<u>ದಿನಾಂಕಃ **22-06-2026** ರಂದು ಸಾಕ್ಷಿಯನ್ನು ಪುನಃ ಕರೆಸಿ ಪ್ರಮಾಣವಚನ ಮಾಡಿಸಲಾಯಿತು.</u>

<u>ಮುಖ್ಯವಿಚಾರಣೆಃ ಅರ್ಜಿದಾರರ ಪರ ಶ್ರೀ **P.C.N** ವಕೀಲರಿಂದಃ</u>

ನಾನು ಈ ಕೇಸಿನಲ್ಲಿ ಅರ್ಜಿದಾರಳಾಗಿದ್ದು, ನನ್ನ ಸಾಕ್ಷ್ಯದ ಮುಖ್ಯವಿಚಾರಣೆಯಾಗಿ ಪ್ರಮಾಣಪತ್ರವನ್ನು ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ. ಪ್ರಮಾಣಪತ್ರದಲ್ಲಿ ಬರೆದಿರುವ ವಿಷಯಗಳು ನನಗೆ ತಿಳಿದಿದೆ ಮತ್ತು ಸತ್ಯವಾಗಿದೆ.

ನಾನು ಈ ದಿನ ನಮ್ಮ ಮದುವೆಯ ಸರ್ಟಿಫಿಕೇಟ್ ಪ್ರತಿ ಹಾಜರುಪಡಿಸಿದ್ದು ಅದನ್ನು ನಿಪಿ -1 ಎಂದು, ನನ್ನ ಆಧಾರ ಕಾರ್ಡಿನ ನೋಟರಿ ದೃಢಿಕೃತ ಪ್ರತಿ ಹಾಜರುಪಡಿಸುತ್ತಿದ್ದು ಅದನ್ನು ನಿಪಿ-2 ಎಂದು, ನಮ್ಮ ಮದುವೆಯ ಆಮಂತ್ರಣ ಪತ್ರಿಕೆ ಹಾಜರುಪಡಿಸಿದ್ದು ಅದನ್ನು ನಿಪಿ-3 ಎಂದು ಗುರುತಿಸಲಾಯ್ತು. ನಮ್ಮ ಕುಟುಂಬದ ಪಡಿತರ ಚೀಟಿಯ ನೋಟರಿ ದೃಢಿಕೃತ ಪ್ರತಿ ಹಾಜರುಪಡಿಸುತ್ತಿದ್ದು ಅದನ್ನು ನಿಪಿ-4 ಎಂದು, ನನ್ನ ಮಕ್ಕಳ ಆಧಾರ ಕಾರ್ಡ ನ ನೋಟರಿ ದೃಢಿಕೃತ ಪ್ರತಿ ಹಾಜರುಪಡಿಸುತ್ತಿದ್ದು ಅದನ್ನು ನಿಪಿ-5 ಮತ್ತು ನಿಪಿ-6 ಎಂದು, ನನ್ನ ಮಕ್ಕಳ ಜನನ ಪ್ರಮಾಣಪತ್ರದ ನೋಟರಿ ದೃಢಿಕೃತ ಪ್ರತಿ ಹಾಜರುಪಡಿಸುತ್ತಿದ್ದು ಅದನ್ನು ನಿಪಿ-7 ಮತ್ತು ನಿಪಿ-8 ಎಂದು ಗುರುತಿಸಲಾಯಿತು. ನಮ್ಮ ಮದುವೆಯ ಒಂದು ಭಾವಚಿತ್ರವನ್ನು ಹಾಜರುಪಡಿಸಿರುತ್ತೇನೆ.

ಈ ಹಂತದಲ್ಲಿ ಮುಂದುವರಿದ ಮುಖ್ಯ ವಿಚಾರಣೆಗೆ ಸಮಯ ಕೋರಿದ್ದು ಸಮಯ ನೀಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಗಿದೆ.)

ಓ ಹೇ ಕೇ ಸ ಇ ಎ ಒ

ಸಹಿ/-

ಹಿರಿಯ ಸಿವಿಲ್ ನ್ಯಾಯಾಧೀಶರುಃ ನ.ರಾ.ಪುರ.

ಸಾಕ್ಷಿದಾರರ ಸಹಿ ಃ